**Akashvani : Bangalore**
**Regional Bulletin In Kannada**
**07.02.2025 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

**೧.ಹದಿನೈದು ಸಾವಿರ ಶಿಕ್ಷಕರ ಶೀಘ್ರ ನೇಮಕ- ಶಿಕ್ಷಣ ಸಚಿವ ಮಧು ಬಂಗಾರಪ್ಪ**

**೨. ಶಿಕ್ಷಣ, ಸಂಶೋಧನೆಗೆ ಹೆಚ್ಚಿನ ಉತ್ತೇಜನ ನೀಡಲು ರಾಜ್ಯ ಸರ್ಕಾರ-ಲಿವರ್ ಪೂಲ್ ವಿಶ್ವವಿದ್ಯಾಲಯ ಒಡಂಬಡಿಕೆ**

**೩.ಏರೋ ಇಂಡಿಯಾ ೨೦೨೫ರ ಹಿನ್ನೆಲೆಯಲ್ಲಿ ಲೋಹದ ಹಕ್ಕಿಗಳ ತಾಲೀಮು**

**೪.ಬೆಂಗಳೂರಿಗೆ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧ್ಯಕ್ಷ ಫಿಲೆಮನ್ ಯಾಂಗ್ ಭೇಟಿ**

**<><*<><>*><>**

ಈಗಾಗಲೇ ಹದಿಮೂರು ಸಾವಿರ ಶಿಕ್ಷಕರನ್ನು ನೇಮಿಸಲಾಗಿದೆ. ಇನ್ನೂ ಹದಿನೈದು ಸಾವಿರ ಶಿಕ್ಷಕರನ್ನು ನೇಮಿಸಿಕೊಳ್ಳಲು ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ರಾಜ್ಯ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದ್ದಾರೆ. ಚಿತ್ರದುರ್ಗದ ಮುರುಘಮಠದ ಅನುಭವ ಮಂಟಪದಲ್ಲಿ ಶಿಕ್ಷಣ ಇಲಾಖೆ ಆಯೋಜಿಸಿದ್ದ ರಾಜ್ಯ ಮಟ್ಟದ ’ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ೨೦೨೪-೨೦೨೫’ ಉದ್ಘಾಟಿಸಿ ಅವರು ಮಾತನಾಡಿದರು. ಕರ್ನಾಟಕ ಪಬ್ಲಿಕ್ ಶಾಲೆಗಳಲ್ಲಿ ಕಲೆ, ಸಂಗೀತ ಮತ್ತು ಇತರೆ ಸಾಂಸ್ಕೃತಿಕ ಕಲೆಗಳನ್ನು ಕಲಿಸುವ ಶಿಕ್ಷಕರನ್ನು ನೇಮಿಸಲಾಗುವುದು ಎಂದು ಮಾಹಿತಿ ನೀಡಿದರು.

**ಧ್ವನಿ: ಮಧು ಬಂಗಾರಪ್ಪ ( ೩೮ ಸೆಕೆಂಡ್ )**

**<><*<><>*><>**

ಶಿಕ್ಷಣ ಹಾಗೂ ಸಂಶೋಧನೆಗೆ ಸಂಬಂಧಿಸಿದಂತೆ ಹೆಚ್ಚಿನ ಸಹಭಾಗಿತ್ವ ಉತ್ತೇಜಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರ ಮತ್ತು ಲಿವರ್ ಪೂಲ್ ವಿಶ್ವವಿದ್ಯಾಲಯ ಮಹತ್ವದ ಒಡಂಬಡಿಕೆಗೆ ಇಂದು ಸಹಿ ಹಾಕಿದವು. ಮುಖ್ಯಮಂತ್ರಿ ಸಿದ್ದರಾಮಯ್ಯ, ಬೃಹತ್ ಮತ್ತು ಭಾರೀ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹಾಗೂ ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ.ಸುಧಾಕರ್ ಅವರ ಸಮ್ಮುಖದಲ್ಲಿ ಬೆಂಗಳೂರಿನ ಮುಖ್ಯಮಂತ್ರಿಯವರ ಅಧಿಕೃತ ನಿವಾಸ ’ಕಾವೇರಿ’ಯಲ್ಲಿ ಒಡಂಬಡಿಕೆ ಏರ್ಪಟ್ಟಿತು. ಬ್ರಿಟಿಷ್ ಡೆಪ್ಯುಟಿ

ಹೈಕಮಿಷನ್‌ನ ಬ್ರಿಟಿಷ್ ಕೌನ್ಸಿಲ್ ವಿಭಾಗದ ನಿರ್ದೇಶಕ ಜನಕ ಪುಷ್ಪನಾಥನ್, ಉಪ ಮುಖ್ಯಸ್ಥ ಜೇಮ್ಸ್ ಗೋಡ್ಬರ್, ಲಿವರ್ ಪೂಲ್ ವಿಶ್ವವಿದ್ಯಾಲಯದ ಕುಲಪತಿ ಪ್ರೊಫೆಸರ್ ಟಿಮ್ ಜೋನ್ಸ್ ಮತ್ತು ಉಪ ಕುಲಪತಿ ಪ್ರೊಫೆಸರ್ ತಾರಿಕ್ ಅಲಿ ಒಡಂಬಡಿಕೆಗೆ ಸಹಿ ಹಾಕಿದರು. ಆವಿಷ್ಕಾರ ಕಾರ್ಯಕ್ರಮಗಳು ಹಾಗೂ ಶಿಕ್ಷಣ ಸಹಕಾರಕ್ಕೆ ಸಂಬಂಧಿಸಿದ ಸಹಭಾಗಿತ್ವವನ್ನು ಸದೃಢಗೊಳಿಸುವ ಜೊತೆಗೆ, ಅದನ್ನು ಉನ್ನತ ಸ್ತರಕ್ಕೆ ಕೊಂಡೊಯ್ಯಲು ಜಂಟಿ ಕಾರ್ಯತಂಡ ರಚಿಸುವ ಗುರಿಯನ್ನು ಒಡಂಬಡಿಕೆ ಹೊಂದಿದೆ.

<><*<><>*><>

ದೇಶ, ಧರ್ಮ ಯಾವುದೇ ಇರಲಿ, ಮಾನವೀಯತೆ ಮುಖ್ಯ. ಅಕ್ರಮ ವಲಸಿಗ ಭಾರತೀಯರನ್ನು ಅಮೆರಿಕದ ಅಧಿಕಾರಿಗಳು ಸರಪಳಿ ಕಟ್ಟಿ ನಡೆಸಿಕೊಳ್ಳುವುದು ಸರಿಯಲ್ಲ. ಇದು ಖಂಡನೀಯ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆಕ್ಷೇಪಿಸಿದ್ದಾರೆ. ಕನಕಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಕ್ಕೆ ಬರಬೇಕಾದ ಅನುದಾನದ ಕುರಿತು ಪ್ರಧಾನಿ, ಕೇಂದ್ರ ಹಣಕಾಸು ಸಚಿವೆ ಹಾಗೂ ಸಂಬಂಧಿಸಿದ ಇಲಾಖೆಯ ಕೇಂದ್ರ ಸಚಿವರನ್ನು ಭೇಟಿಯಾಗಿದ್ದೇವೆ. ಎಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿ ಮಾಡಲು ಅವರು ವಿತ್ತ ಸಚಿವರಲ್ಲ. ಅವರಿಗೆ ರಾಜ್ಯದ ಬಗ್ಗೆ ಆಸಕ್ತಿ ಇದ್ದರೆ, ಕೇಂದ್ರ ಸರ್ಕಾರದ ಮೇಲೆ ಒತ್ತಡ ತರಲಿ. ಅವರಿಗೆ ತಮ್ಮ ವೈಯಕ್ತಿಕ ಆಸಕ್ತಿ ಹೊರತಾಗಿ, ರಾಜ್ಯದ ಬಗ್ಗೆ ಯಾವುದೇ ಆಸಕ್ತಿ ಇಲ್ಲ ಎಂದು ದೂರಿದರು. ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ನಿರ್ಮಾಣದ ಜಾಗ ನಿಗದಿ ಮಾಡುವುದು ನಮ್ಮ ಕೈಯಲ್ಲಿ ಇಲ್ಲ. ನಾವು ಸಲಹೆ ನೀಡಬಹುದು. ಆದರೆ, ಅಂತಿಮವಾಗಿ ವಿಮಾನಯಾನ ಪ್ರಾಧಿಕಾರ ತೀರ್ಮಾನ ಮಾಡುತ್ತದೆ ಎಂದರು. ಮುಡಾ ಪ್ರಕರಣವನ್ನು ಸಿಬಿಐ ತನಿಖೆಗೆ ನೀಡಲು ಹೈಕೋರ್ಟ್ ನಿರಾಕರಿಸಿದ ಕುರಿತು ಕೇಳಿದಾಗ, ಈ ಪ್ರಕರಣವನ್ನು ಯಾವ ಕಾರಣಕ್ಕೆ ಸಿಬಿಐ ತನಿಖೆಗೆ ನೀಡಬೇಕು? ಲೋಕಾಯುಕ್ತ ತನಿಖೆ ನಡೆಯುತ್ತಿರುವಾಗ, ಜಾರಿ ನಿರ್ದೇಶನಾಲಯ ಕೂಡ ತನಿಖೆ ಮಾಡುತ್ತಿದೆ. ಈ ಪರಿಸ್ಥಿತಿಯಲ್ಲಿ ಮೂರನೇ ಸಂಸ್ಥೆಯಿಂದ ತನಿಖೆ ಏಕೆ ಬೇಕು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಶ್ನಿಸಿದರು.

<><*<><>*><>

ಮುಡಾ ಪ್ರಕರಣದಲ್ಲಿ ಲೋಕಾಯುಕ್ತ ತನಿಖೆ ಸರಿಯಾಗಿದೆ ಎಂಬ ದೃಷ್ಟಿಯಲ್ಲಿ ಉಚ್ಚ ನ್ಯಾಯಾಲಯ ಆದೇಶ ನೀಡಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅಭಿಪ್ರಾಯಪಟ್ಟರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ಪ್ರಕರಣವನ್ನು ಸಿಬಿಐಗೆ ನೀಡುವಂತಹ ಅಂಶಗಳು ಇರಲಿಲ್ಲ. ಲೋಕಾಯುಕ್ತ ಸಂಸ್ಥೆಯ ಮೇಲೆ ಉಚ್ಚ ನ್ಯಾಯಾಲಯ ವಿಶ್ವಾಸವಿಟ್ಟು, ಈ ರೀತಿಯ ಆದೇಶ ನೀಡಿದೆ ಎಂದರು. ದೂರುದಾರರು ಸುಪ್ರೀಂ ಕೋರ್ಟ್‌ಗೆ ಬೇಕಿದ್ದರೆ ಹೋಗಲಿ. ನಮ್ಮ ಕಾನೂನು ತಂಡ ಅದನ್ನು ಪರಿಶೀಲಿಸಿ, ಅದಕ್ಕೆ ಉತ್ತರ ನೀಡುತ್ತದೆ ಎಂದು ಹೇಳಿದರು.

<><*<><>*><>

ಏಷ್ಯಾದ ಅತಿದೊಡ್ಡ ಏರ್ ಶೋ - ಏರೋ ಇಂಡಿಯಾ ೨೦೨೫ರ ೧೫ನೇ ಆವೃತ್ತಿಯು ಬೆಂಗಳೂರಿನ ಯಲಹಂಕದ ವಾಯುಪಡೆ ನಿಲ್ದಾಣದಲ್ಲಿ ಇದೇ ೧೦ ರಿಂದ ೧೪ ರವರೆಗೆ ನಡೆಯಲಿದೆ. ಕಾರ್ಯಕ್ರಮದ ಮೊದಲ ಮೂರು ದಿನಗಳು ವಾಣಿಜ್ಯ ವ್ಯವಹಾರದ ದಿನಗಳಾಗಿದ್ದು, ೧೩ ಮತ್ತು ೧೪ ರಂದು ಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಲು ಅನುವು ಮಾಡಿಕೊಡಲಾಗಿದೆ. ಏರ್ ಶೋ ಹಿನ್ನೆಲೆಯಲ್ಲಿ ಈಗಾಗಲೇ ಲೋಹದ ಹಕ್ಕಿಗಳು ತಾಲೀಮು ನಡೆಸುತ್ತಿವೆ. ವೈಮಾನಿಕ ಪ್ರದರ್ಶನಕ್ಕೆ ಭೇಟಿ ನೀಡುವ ಜನರ ಸುರಕ್ಷತೆ ಖಾತರಿ ಪಡಿಸಿಕೊಳ್ಳಲು ಗೃಹ ಸಚಿವಾಲಯ, ಬೆಂಗಳೂರು ಪೊಲೀಸ್, ಸಿಐಎಸ್ಎಫ್ ಮತ್ತು ಗುಪ್ತಚರ ಸಂಸ್ಥೆಗಳ ಸಹಯೋಗದೊಂದಿಗೆ ಬಹು ಹಂತದ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿದೆ. ದಿನದ ೨೪ ಗಂಟೆಯೂ ಸಿಸಿಟಿವಿ ಮೇಲ್ವಿಚಾರಣೆ ಇರಲಿದೆ. ಪ್ರದರ್ಶನ ಸ್ಥಳದಲ್ಲಿ ಸಂದರ್ಶಕರ ಸುಗಮ ಸಂಚಾರಕ್ಕಾಗಿ ೧೦೦ಕ್ಕೂ ಅಧಿಕ ಇ-ಕಾರ್ಟ್‌ಗಳ ವಿಶೇಷ ಬಳಕೆಗೆ ನಿರ್ಧರಿಸಲಾಗಿದೆ. ಅಲ್ಲದೇ ಈ ಪ್ರದೇಶದಲ್ಲಿ ಅನಧಿಕೃತ ಡ್ರೋನ್ ಚಟುವಟಿಕೆ ನಿರ್ವಹಿಸಲು, ನಿಗ್ರಹ ಕ್ರಮಗಳೊಂದಿಗೆ ಕೆಂಪು ಡ್ರೋನ್ ವಲಯಗಳನ್ನು ಗೊತ್ತುಪಡಿಸಲಾಗಿದೆ. ಯಲಹಂಕ ವಾಯುಪಡೆ ನಿಲ್ದಾಣಕ್ಕೆ ಭೇಟಿ ನೀಡುವವರಿಗೆ ಉಚಿತ ಸಾರಿಗೆ ಸೌಲಭ್ಯಗಳನ್ನು ಒದಗಿಸಲು ರಕ್ಷಣಾ ಸಚಿವಾಲಯ ಎಸಿ, ವೊಲ್ವೊ, ಶೆಟಲ್ ಬಸ್‌ಗಳನ್ನು ಗುತ್ತಿಗೆ ಪಡೆದುಕೊಂಡಿದೆ.

**<><*<><>*><>**

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧ್ಯಕ್ಷ ಫಿಲೆಮನ್ ಯಾಂಗ್ ಇಂದು ಬೆಂಗಳೂರಿಗೆ ಭೇಟಿ ನೀಡಿದರು. ಮಹಿಳೆಯರನ್ನು ಪ್ರಮುಖ ಫಲಾನುಭವಿಗಳನ್ನಾಗಿ ಕೇಂದ್ರೀಕರಿಸುವ ರಾಜ್ಯ ಸರ್ಕಾರದ ೫ ಖಾತರಿ ಯೋಜನೆಗಳ ಮೂಲಕ ಲಿಂಗ ಸಮಾನತೆಯನ್ನು ತರುವಲ್ಲಿ ಕರ್ನಾಟಕ ಸರ್ಕಾರದ ಉಪಕ್ರಮಗಳ ಕುರಿತು ಅವರು ಮೆಚ್ಚುಗೆ ವ್ಯಕ್ತಪಡಿಸಿದರು. ರಾಜ್ಯದಲ್ಲಿ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ಸಮಾನತೆಯನ್ನು ಉತ್ತೇಜಿಸಲು ಮಹಿಳಾ ಪರ ಯೋಜನೆಗಳನ್ನು ಜಾರಿಗೊಳಿಸಿದಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇದೇ ವೇಳೆ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧ್ಯಕ್ಷ ಫಿಲೆಮನ್ ಯಾಂಗ್ ಅಭಿನಂದಿಸಿದರು.

**<><*<><>*><>**

ಸರ್ಕಾರಿ ನೌಕಕರ ಸಂಘದ ಮಾಜಿ ಅಧ್ಯಕ್ಷ ಸುರೇಶ್ ಬಾಬು ಅವರಿಗೆ ಸಂಬಂಧಿಸಿದ ವಿವಿಧ ಸ್ಥಳಗಳಲ್ಲಿ ಲೋಕಾಯುಕ್ತ ಪೊಲೀಸರು ಇಂದು ದಾಳಿ ನಡೆಸಿದ್ದು, ಮಹತ್ವದ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ. ಲೋಕಾಯುಕ್ತ ಎಸ್‌ಪಿ ಧನಂಜಯ್ ನೇತೃತ್ವದಲ್ಲಿ ದಾಳಿ ನಡೆದಿದ್ದು, ಕೋಲಾರ ನಗರದ ಹಾರೋಹಳ್ಳಿ ಮನೆಯಲ್ಲಿ ಏಳುವರೆ ಲಕ್ಷ ರೂಪಾಯಿ ನಗದು ಹಾಗೂ ಧರ್ಮರಾಯನಗರ, ಕೋಟೆ ಬಡಾವಣೆ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ಬಳಿಯಿರುವ ರಾಸಾಯನಿಕ ಕಾರ್ಖಾನೆಯಲ್ಲಿ ಜಮೀನುಗಳಿಗೆ ಸಂಬಂಧಿಸಿದ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ

ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ. ಸುರೇಶ್ ಬಾಬು ಅವರ ಅಪ್ತರಾದ ಸುನೀಲ್ ಮತ್ತು ಸಂದೀಪ್ ಅವರ ಮನೆಗಳ ಮೇಲೆ ಸಹ ದಾಳಿ ನಡೆದಿದೆ.

**<><*<><>*><>**

ಶಾಲಾ ಮಕ್ಕಳ ಮುಗ್ಧತೆಯನ್ನು ದುರುಪಯೋಗಪಡಿಸಿಕೊಳ್ಳುವವರ ಸಂಖ್ಯೆ ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿದೆ. ಸಾಮಾಜಿಕ ಜಾಲಾತಾಣ ಬಳಸುವ ವೇಳೆ ವಿದ್ಯಾರ್ಥಿಗಳು ಎಚ್ಚರಿಕೆಯಿಂದ ಇರಬೇಕು ಎಂದು ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ನ್ಯಾಯಾಧೀಶೆ ನೂರುನ್ನೀಸಾ ಸಲಹೆ ನೀಡಿದ್ದಾರೆ. ತುಮಕೂರು ಶೈಕ್ಷಣಿಕ ಜಿಲ್ಲೆಯ ಪ್ರೌಢ ಶಾಲಾ ಹಂತದ ಮಕ್ಕಳ ರಕ್ಷಣಾ ಸಮಿತಿಯನ್ನು ಪ್ರತಿನಿಧಿಸುವ ಮಕ್ಕಳಿಗೆ 'ಶಾಲಾ ಮಟ್ಟದಲ್ಲಿ ಮಕ್ಕಳ ರಕ್ಷಣೆ ಕುರಿತು ಜಿಲ್ಲಾ ಮಟ್ಟದ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ತುಮಕೂರು ಜಿಲ್ಲೆಯಲ್ಲಿ ವರ್ಷದಿಂದ ವರ್ಷಕ್ಕೆ ಪೋಕ್ಸೋ ಪ್ರಕರಣಗಳ ಸಂಖ್ಯೆ ಹೆಚ್ಚುತ್ತಿದೆ. ಈ ವರ್ಷ ಜನವರಿ ತಿಂಗಳಲ್ಲಿಯೇ ೧೮ ಪ್ರಕರಣಗಳು ದಾಖಲಾಗಿವೆ ಎಂದು ಆತಂಕ ವ್ಯಕ್ತಪಡಿಸಿದರು. ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಕೆ.ಟಿ. ಮಾತನಾಡಿ, ಇಡೀ ಭಾರತದಲ್ಲಿಯೇ ಮೊದಲ ಬಾರಿಗೆ ೨೦೧೬ರಲ್ಲಿ ಕರ್ನಾಟಕ ರಾಜ್ಯವು ಮಕ್ಕಳ ಹಕ್ಕುಗಳ ರಕ್ಷಣಾ ನೀತಿ-೨೦೧೬ ರೂಪಿಸಿದೆ. ನೀತಿ ರೂಪಿತವಾಗಿ ೬ ವರ್ಷಗಳು ಪೂರ್ಣಗೊಂಡರೂ ಶಾಲಾ, ಕಾಲೇಜುಗಳು ಇದನ್ನು ಗಂಭೀರವಾಗಿ ಪರಿಗಣಿಸಿದಂತೆ ಕಾಣುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

**<><*<><>*><>**

ಈ ತಿಂಗಳ ಅಂತ್ಯದಲ್ಲಿ ಒಂದು ರಾಜ್ಯ ಒಂದು ಗ್ರಾಮೀಣ ಬ್ಯಾಂಕ್‌ಗಳ ರಚನೆ ಕಾರ್ಯ ಆಗಲಿದೆ. ಗ್ರಾಮೀಣ ಬ್ಯಾಂಕ್‌ಗಳ ೧೨ ಪ್ರಯೋಜಿತ ಬ್ಯಾಂಕಗಳು ಇದ್ದು, ಈಗ ಅವುಗಳ ಅವಶ್ಯಕತೆ ಇಲ್ಲ. ಅದಕ್ಕಾಗಿ ರಾಷ್ಟ್ರೀಯ ಗ್ರಾಮೀಣ ಬ್ಯಾಂಕ್ ರಚನೆ ಆಗಬೇಕಿದೆ ಎಂದು ಅಖಿಲ ಭಾರತ ಗ್ರಾಮೀಣ ಬ್ಯಾಂಕ್ ಉದ್ಯೋಗಿಗಳ ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ವೆಂಕಟೇಶ್ ರೆಡ್ಡಿ ಒತ್ತಾಯಿಸಿದ್ದಾರೆ. ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಳ್ಳಾರಿಯ ಕಮ್ಮ ಭವನದಲ್ಲಿ ನಾಳೆಯಿಂದ ಎರಡು ದಿನಗಳ ಕಾಲ ಸಂಘಟನೆಯ ೧೫ ನೇ ವಾರ್ಷಿಕ ಸಮ್ಮೇಳನ ನಡೆಯಲಿದೆ. ನಂತರ ಮಹಿಳಾ ಸಮಾವೇಶ ನಡೆಯಲಿದೆ. ಇದರಲ್ಲಿ ಮುನ್ನೂರಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

**<><*<><>*><>**

ಮಕ್ಕಳ ರಕ್ಷಣೆ ಮತ್ತು ಸುರಕ್ಷತೆಗೆ ಖಾಸಗಿ ಶಾಲಾ ಆಡಳಿತ ಮಂಡಳಿಗಳು ಆದ್ಯತೆ ನೀಡಬೇಕೆಂದು ದಾವಣಗೆರೆ ಜಿಲ್ಲಾಧಿಕಾರಿ ಡಾ. ಜಿ.ಎಂ.ಗಂಗಾಧರ ಸ್ವಾಮಿ ಸೂಚಿಸಿದ್ದಾರೆ. ಖಾಸಗಿ ಶಾಲಾ ಆಡಳಿತ

ಮಂಡಳಿ, ಮಕ್ಕಳ ರಕ್ಷಣಾ ಘಟಕ ಮತ್ತು ಸ್ಮಾರ್ಟ್ ಸಿಟಿ ಯೋಜನೆ ಅಧಿಕಾರಿಗಳೊಂದಿಗೆ ಜಂಟಿ ಸಮಾಲೋಚನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೫೦೦ಕ್ಕಿಂತ ಹೆಚ್ಚು ಖಾಸಗಿ ಶಾಲೆಗಳು ೧ ಸಾವಿರದ ೩೦ಕ್ಕೂ ಹೆಚ್ಚು ಶಾಲಾ ಬಸ್‌ಗಳನ್ನು ಹೊಂದಿವೆ. ಈ ಎಲ್ಲ ಬಸ್‌ಗಳಲ್ಲಿ ಮಕ್ಕಳ ಸುರಕ್ಷತಾ ದೃಷ್ಟಿಯಿಂದ ರಕ್ಷಣಾ ಕ್ರಮಗಳನ್ನು ಅನುಸರಿಸುವುದು ಕಡ್ಡಾಯವಾಗಿದೆ ಎಂದು ನಿರ್ದೇಶಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**